ಬುಧವಾರ, 10.12.2025
ಬೆಂಗಳೂರು, ಬೆಲೆ: 5ರೂ,
2 ಪುಟಗಳು
ಸಂಪುಟ 01 - ಸಂಚಿಕೆ 119

Digital Varthe Kannada Daily
Volume 01 - Issue 119
Wednesday 10.12.2025
Price: 5/- Rs
2 Pages Bangalore

PRGI/RNI: KNKAN/25/A1348

ಡಿಜಿಟಲ್ ವಾರ್ತೆ
ಕನ್ನಡಿಗರ ಶಕ್ತಿ
ಕನ್ನಡ ದಿನಪತ್ರಿಕೆ

DIGITAL VARTHE
digitalvarthe@gmail.com
www.digitalvarthe.com

# ಪ್ರತಿ ಮನೆಗೆ ರಾಷ್ಟ್ರೀಯ ಸ್ವಯಂಸೇವಕ "ಸಂಘ ಶತಾಬ್ದಿ" ಅಭಿಯಾನ

## ಶಿವಗಂಗೆ ತಪ್ಪಲಿನ ಸ್ವಾಮೀಜಿಗಳಿಗೆ ಆರ್.ಎಸ್.ಎಸ್ ಕರಪತ್ರ, ಭಾರತಮಾತೆ ಭಾವಚಿತ್ರ, ಆರ್.ಎಸ್.ಎಸ್ ಹಿನ್ನಲೆಯುಳ್ಳ ಪುಸ್ತಕ ನೀಡುವುದರ ಮೂಲಕ





ನೆಲಮಂಗಲ: ರಾಷ್ಟ್ರೀಯ ಸ್ವಯಂಸೇವಕ ಸಂಘ ವಿಶ್ವದಲ್ಲಿ ಅತಿ ದೊಡ್ಡ ಸಾಮಾಜಿಕ ಸಂಘಟನೆಯಾಗಿದ್ದು ಇಂದು ಸ್ಥಾಪನೆಯಾಗಿ 100 ವರ್ಷಗಳನ್ನು ಪೂರೈಸಿ "ಸಂಘ ಶತಾಬ್ದಿ"ಯನ್ನು ಆಚರಿಸುತ್ತಿದೆ. ಈ ಸಂದರ್ಭದಲ್ಲಿ ಆರ್ಎಸ್ಎಸ್ ನೂರು ವರ್ಷದ ಸೇವಾ ಯಾತ್ರೆಯನ್ನು ದೇಶದ ಪ್ರತಿ ಮನೆಮನೆಗಳಿಗೆ ತಲುಪಿಸುವ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ. ಶಿವಗಂಗೆ ತಪ್ಪಲಿನ ಸ್ವಾಮೀಜಿಗಳಿಗೆ ಆರ್ ಎಸ್ ಎಸ್ ನ ಕರಪತ್ರ ಭಾರತಮಾತೆಯ ಭಾವಚಿತ್ರ ಮತ್ತು ಆರ್ ಎಸ್ ಎಸ್ ಹಿನ್ನಲೆಯುಳ್ಳ ಪುಸ್ತಕವನ್ನು ನೀಡುವುದರ ಮೂಲಕ ಚಾಲನೆ ನೀಡಲಾಯಿತು.

ಅಭಿಯಾನದಲ್ಲಿ ಬೆಂಗಳೂರು ಗ್ರಾಮಾಂತರ ಬಿಜೆಪಿ ಜಿಲ್ಲಾಧ್ಯಕ್ಷ ರಾಮಕೃಷ್ಣಪ್ಪ, ಅಗಳಕುಪ್ಪೆ ಕುಪ್ಪೆ ಕೆಂಪರಾಮಯ್ಯ, ಶಿವ ಕುಮಾರ್, ಸೋಂಪುರದ ಜಗದೀಶ್ ಜಿ, ಹೊನ್ನೇನಹಳ್ಳಿ ರವೀಶ್ ಎಚ್ ಕೆ, ಬರಗೇನಹಳ್ಳಿ ಚಿಕ್ಕರಾಜು, ಪೆಮ್ಮನಹಳ್ಳಿ ಸಿದ್ದರಾಜು ಪಾಲ್ಗೊಂಡಿದ್ದರು.

ಈ ಅಭಿಯಾನದಲ್ಲಿ ಶ್ರೀಗಳು ಮಾತನಾಡಿ ದೇಶದ ಸಮಗ್ರತೆಯನ್ನು ಧರ್ಮವನ್ನು ಉಳಿಸುವ ಬೆಳೆಸುವ ನಿಟ್ಟಿನಲ್ಲಿ ರಾಷ್ಟ್ರೀಯ ಸ್ವಯಂಸೇವಕ ಸಂಘ ಅವಿರತ ಶ್ರಮಿಸುತ್ತಿದೆ. ಇದೊಂದು ರಾಷ್ಟ್ರಭಕ್ತಿಯ ಸೇವಾ ಮನೋಭಾವವುಳ್ಳ ಸ್ವಯಂ ಸೇವಕರನ್ನು ಹೊಂದಿದ ಸಂಘಟನೆಯಾಗಿ ಸಾಮಾಜಿಕ ಸಾಂಸ್ಕೃತಿಕ ರಾಷ್ಟ್ರೀಯ ಆಚಾರ ವಿಚಾರಗಳನ್ನು ಪರಿಪಾಲಿಸುವ, ಕೌಟುಂಬಿಕ ಮೌಲ್ಯವನ್ನು ಎತ್ತಿ ಹಿಡಿಯುವ ಸಾಮಾಜಿಕ ಸಮಾನತೆಗೆ ಮುನ್ನುಡಿಯಾಗಿ ಸಂಘ ನಡೆದು ಬರುತ್ತಿದೆ. ಸಮಾಜ ಸೇವೆಯಲ್ಲಿ ಸಂಘದ ಸ್ವಯಂಸೇವಕರು ಪಾಲ್ಗೊಂಡು ರಾಷ್ಟ್ರೀಯ ವಿಪತ್ತುಗಳು, ಅವಘಡಗಳು ಸಂಭವಿಸಿದಲ್ಲಿ ಸೇನಾ ರೂಪದಲ್ಲಿ ತಮ್ಮ ಜೀವವನ್ನು ಪಣಕ್ಕಿಟ್ಟು ಸೇವೆಯನ್ನು ಮಾಡುತ್ತಾರೆ.



ರಾಷ್ಟ್ರೀಯ ಸ್ವಯಂಸೇವಕ ಸಂಘ ತನ್ನ ಶತಾಬ್ದಿಯ ಸುಸಂದರ್ಭದಲ್ಲಿ ವಿಶ್ವ ಹ್ಯಾಪಿಯಾಗಿ ಬೆಳೆಯುತ್ತಿದ್ದು ಪ್ರಪಂಚದ ಹಲವು ದೇಶಗಳಲ್ಲಿ ತನ್ನ ಶಾಖೆಗಳನ್ನು ಹೊಂದಿದ್ದು ದೇಶಪ್ರೇಮ ಹಿಂದೂ ಧರ್ಮ ಮತ್ತು ಮಾತೃಭೂಮಿಯ ಸೇವೆಯನ್ನು ಎಲ್ಲಿಯೂ ಪಸರಿಸುವ ಮಹಾಕಾರ್ಯ ಮಾಡುತ್ತಿದ್ದು ಇನ್ನಷ್ಟು ಬೆಳೆದು ವಿಶ್ವವ್ಯಾಪಿಯಾಗಿ ತನ್ನ ವ್ಯಾಪ್ತಿಯನ್ನು ವಿಸ್ತರಿಸಲಿ ಎಂದು ಹರಸಿದರು.

ಅಭಿಯಾನದಲ್ಲಿ ಪಾಲ್ಗೊಂಡ ರಾಮಕೃಷ್ಣಪ್ಪ ಮಾತನಾಡಿ ರಾಷ್ಟ್ರೀಯ ಸ್ವಯಂ ಸೇವಾ ಸಂಘದ ನೂರು ವರ್ಷದ ಮಹಾ ಯಾತ್ರೆಯ ಹೆಜ್ಜೆ ಗುರುತುಗಳನ್ನು ಪ್ರತಿ ಮನೆ ಮನೆಗಳಿಗೆ ತಲುಪಿಸುವ ಮಹಾ ಕಾರ್ಯದಲ್ಲಿ ಭಾಗಿಯಾಗಿತ್ತಿರುವುದು ಸಂಘದ ಸ್ವಯಂ ಸೇವಕನಾಗಿ ಹೆಮ್ಮೆಯ ವಿಚಾರ ಈ ಅಭಿಯಾನವನ್ನು ಎಲ್ಲ ಮನೆಗಳಿಗೆ ತಲುಪಿಸುವ ಮೂಲಕ ಸಂಘದ ಹಿನ್ನೆಲೆ ಸಂಘದ ವಿಚಾರಗಳು ಮತ್ತು ರಾಷ್ಟ್ರೀಯತೆಯ ಭಾವವನ್ನು ಯುವಜನತೆ ರೈತರು ಮಹಿಳೆಯರು ಮತ್ತು ವಿದ್ಯಾರ್ಥಿಗಳಿಗೆ ತಲುಪಿಸುವ ನಿಟ್ಟಿನಲ್ಲಿ ಮನೆ ಮನೆಗೆ ಸಂಘದ ಕರಪತ್ರ ಭಾರತಮಾತೆಯು ಭಾವಚಿತ್ರ ಮತ್ತು ಕಿರು ಹೊತ್ತಿಗೆಯನ್ನು ನೀಡುವ ಕಾರ್ಯವನ್ನು ಶುರುಮಾಡಿದ್ದು ಶ್ರೀಗಳಿಗೆ ಮೊದಲನೆಯದಾಗಿ ನೀಡುವ ಮೂಲಕ ಅಭಿಯಾನವನ್ನು ಪ್ರಾರಂಭಿಸಿದ್ದೇವೆ ಮುಂದೆ ಎಲ್ಲಾ ಗ್ರಾಮಗಳಿಗೆ ಎಲ್ಲ ಮನೆಗಳಿಗೆ ಅಭಿಯಾನ ಮುಂದುವರಿಸಿ ಕಾಲಮಿತಿಯೊಳಗೆ ಅಭಿಯಾನವನ್ನು ಯಶಸ್ವಿಗೊಳಿಸುವುದಾಗಿ ತಿಳಿಸಿದರು.






ರವೀಶ್ ಎಚ್ ಕೆ ಮಾತನಾಡಿ ಈ ಹಿಂದೆ ಅಯೋಧ್ಯೆ ಶ್ರೀರಾಮ ಮಂದಿರ ನಿರ್ಮಾಣದ ಅಭಿಯಾನದಲ್ಲಿ ಪಾಲ್ಗೊಂಡು ಮನೆಮನೆಯಲ್ಲಿ ನಿಧಿ ಸಂಗ್ರಹ ಕಾರ್ಯದಲ್ಲಿ ಪಾಲ್ಗೊಂಡು ತದನಂತರ ಪ್ರತಿ ಮನೆಗಳಿಗೆ ಅಯೋಧ್ಯ ರಾಮಮಂದಿರದ ಮಂತ್ರಾಕ್ಷತೆಯನ್ನು ತಲುಪಿಸುವ ಕಾರ್ಯದಲ್ಲಿ ಪಾಲ್ಗೊಂಡಿರುವಂತಹ ಹೆಮ್ಮೆಯ ಕ್ಷಣಗಳನ್ನು ಕಾರ್ಯಕರ್ತರು ಅನುಭವಿಸಿದ್ದೇವೆ ಈಗ ನಮ್ಮ ಕಾಲಮಾನದಲ್ಲಿ ರಾಷ್ಟ್ರೀಯ ಸ್ವಯಂಸೇವಕ ಸಂಘದ ಸಂಘ ಶತಾಬ್ದಿಯ ಕರಪತ್ರಗಳನ್ನು ಪ್ರತಿ ಮನೆಗೆ ತಲುಪಿಸುವ ಕ್ಷಣವು ಸಹ ಹೆಮ್ಮೆಯ ಸಂಗತಿಯಾಗಿದೆ ಎಂದರು.

ಅಭಿಯಾನದಲ್ಲಿ ಮೇಲಣ ಗವಿ ಮಠದ ಶ್ರೀ ಮಲಯ ಶಾಂತಮುನಿ ದೇಶಿ ಕೇಂದ್ರ ಶಿವಾಚಾರ್ಯ ಸ್ವಾಮೀಜಿ, ಚನ್ನವೀರಸ್ವಾಮಿ ಕಂಬಾಳು ಮಠದ ಶ್ರೀ ಚನ್ನವೀರ ಶಿವಾಚಾರ್ಯ ಸ್ವಾಮೀಜಿ ಮತ್ತು ಹೊನ್ನಮ್ಮ ಗವಿಮಠದ ಶ್ರೀ ರುದ್ರಮುನಿ ಶಿವಾಚಾರ್ಯ ಸ್ವಾಮೀಜಿ ಭಾಗಿಯಾಗಿ ಸಂಘದ ಸೇವ ಕಾರ್ಯವನ್ನು ಅಭಿನಂದಿಸಿದರು








Printed by: R Ramesh, Published by Abhishek D R On Behalf of Abhishek D R, Printed at Maruthi Enterprises. No.1159, Near Floor Mill, D Cross, Doddaballapura Town, Bengaluru rural, Karnataka - 561203,
Published at No. 3769/1, Rajarathna Nivasa, KSRTC Layout, Near Ambedkar Stadium, Rayan Nagara, Nelamangala. Editor Abhishek D R.

# ಪ್ರೀತಿ ಹೆಸರಲ್ಲಿ ಬ್ಲ್ಯಾಕ್‌ಮೇಲ್: ಕಿರುಕುಳ ತಾಳಲಾರದೆ ಯುವತಿ ನೇಣಿಗೆ ಶರಣು





**ರಾಮನಗರ:** ಪ್ರೀತಿಸಿದ ಯುವಕ ಮದುವೆಗೆ ನಿರಾಕರಿಸಿದ್ದಕ್ಕೆ ಯುವತಿ ಯೊಬ್ಬಳು ನೇಣಿಗೆ ಶರಣಾದ ಘಟನೆ ರಾಮನಗರ ತಾಲೂಕಿನ ವಿಭೂತಿಕೆರೆ ಗ್ರಾಮದಲ್ಲಿ ನಡೆದಿದೆ.

ನೇಣಿಗೆ ಶರಣಾದ ಯುವತಿ ಯನ್ನು ವರ್ಷಿಣಿ(22) ಎಂದು ಗುರುತಿಸ ಲಾಗಿದೆ. ಯುವತಿ ಡೆತ್ ನೋಟ್ ಬರೆದಿಟ್ಟು, ಬಾನುವಾರ ರಾತ್ರಿ ಆತ್ಮಹತ್ಯೆಗೆ ಶರಣಾಗಿದ್ದಾಳೆ. ಕಳೆದ ಎರಡು ವರ್ಷಗಳಿಂದ ವರ್ಷಿಣಿ ಹಾಗೂ ಯುವಕ ಪರಸ್ಪರ ಪ್ರೀತಿಸುತ್ತಿದ್ದರು. ಆತ ಮದುವೆಗೆ ನಿರಾಕರಿಸಿದ್ದಕ್ಕೆ ಮನನೊಂದು ಆತ್ಮಹತ್ಯೆ ಮಾಡಿಕೊಂಡಿದ್ದಾಳೆ ಎಂದು ತಿಳಿದು ಬಂದಿದೆ. ರಾಮನಗರ ಗ್ರಾಮಾಂತರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ. ಯುವತಿಯ ಮೃತದೇಹವನ್ನು ಮರಣೋತ್ತರ ಪರೀಕ್ಷೆಗೆ ಜಿಲ್ಲಾಸ್ಪತ್ರೆಗೆ ರವಾನಿಸ ಲಾಗಿದೆ.

ಡೆತ್‌ನೋಟ್‌ನಲ್ಲಿ ಏನಿದೆ: ಸಾಯುವ ಮುನ್ನ ಯುವತಿ ಬರೆದ ಡೆತ್ ನೋಟ್‌ನಲ್ಲಿ ನನ್ನ ಸಾವಿಗೆ ದೇವರದೊಡ್ಡಿ ಗ್ರಾಮದ ಅಭಿ ಎಂಬ ಯುವಕ ಕಾರಣ ಎಂದು ಬರೆದಿದ್ದಾಳೆ. ಅಭಿ ಪ್ರೀತಿ ಹೆಸರಲ್ಲಿ ಮೋಸ ಮಾಡಿದ್ದಾನೆ. ನನ್ನನ್ನು ಬ್ಲಾಕ್‌ಮೇಲ್ ಮಾಡಿ ಪ್ರಗ್ನೆಂಟ್ ಮಾಡಿ ಬಳಿಕ ಗರ್ಭಪಾತ ಮಾಡಿಸಿದ್ದ. ಹಣ ಹಾಗೂ ಚಿನ್ನದ ಉಂಗುರ ಪಡೆದು ವಂಚಿಸಿದ್ದಾನೆ. ಈಗ ಮತ್ತೆ ಕಿರುಕುಳ ನೀಡ್ತಿದ್ದಾನೆ. ನನ್ನ ಸಾವಿಗೆ ಕಾರಣವಾದ ಅಭಿಯನ್ನು ಸುಮ್ಮನೆ ಬಿಡಬೇಡಿ. ನನ್ನ ಹಾಗೆ ಯಾರಿಗೂ ಮೋಸ ಆಗಬಾರದು ಎಂದು ಬರೆದಿದ್ದಾಳೆ. ಯುವತಿ ಪೋಷಕರ ಆಕ್ರಂದನ ಮುಗಿಲು ಮುಟ್ಟಿದ್ದು, ಸಾವಿಗೆ ನ್ಯಾಯ ಕೊಡಿಸುವಂತೆ ಕಣ್ಣೀರು ಹಾಕಿದ್ದಾರೆ. ಮಗಳಿಗೆ ಕಿರುಕುಳ ನೀಡಿರೋ ಅಭಿಯನ್ನು ಕೂಡಲೇ ಬಂಧಿಸಿ, ಸೂಕ್ತ ಕ್ರಮ ಜರುಗಿಸುವಂತೆ ಒತ್ತಾಯ ಮಾಡಿದ್ದಾರೆ. ಪೊಲೀಸರು ಆರೋಪಿ ಪತ್ತೆಗೆ ಬಲೆ ಬೀಸಿದ್ದಾರೆ

ಸುದ್ದಿ ಹಾಗೂ ಜಾಹಿರಾತುಗಳಿಗಾಗಿ ಸಂಪರ್ಕಿಸಿ:
9538786812 /
9880655634

# ಶಿವರಾತ್ರಿಶ್ವರ ಶಿವಯೋಗಿಗಳ ಜಯಂತ್ಯೋತ್ಸವ: ರಾಷ್ಟ್ರಪತಿ ದ್ರೌಪದಿ ಮುರ್ಮು ಆಗಮನ

**ಮಂಡ್ಯ:** ಜಿಲ್ಲೆಯ ಮಳವ ಳ್ಳಿಯಲ್ಲಿ ಸುತ್ತೂರಿನ ಶಿವರಾತ್ರಿ ಶಿವಯೋಗಿಗಳರವರ 1066ನೇ ಜಯಂತಿ ಮಹೋತ್ಸವವನ್ನು ಉದ್ಘಾಟಿಸಲು ಡಿಸೆಂಬರ್ 17 ರಂದು ಭಾರತದ ಗೌರವಾನ್ವಿತ ರಾಷ್ಟ್ರಪತಿ ದ್ರೌಪದಿ ಮುರ್ಮು ಆಗಮಿಸಲಿದ್ದಾರೆ. ರಾಷ್ಟ್ರಪತಿಗಳ ಭೇಟಿಯ ಹಿನ್ನೆಲೆಯಲ್ಲಿ ಜಿಲ್ಲಾಡಳಿತ ಮತ್ತು ಪೊಲೀಸ್ ಇಲಾಖೆಯು ಭದ್ರತೆ ಮತ್ತು ಸಿದ್ಧತೆಗಳ ಕುರಿತು ಅಂತಿಮ ಹಂತದ ಪರಿಶೀಲನೆ ನಡೆಸಿದೆ.

ಮೈಸೂರು ದಕ್ಷಿಣ ವಲಯದ ಐಜಿಪಿ ಬೋರಲಿಂಗಯ್ಯ, ಜಿಲ್ಲಾಧಿಕಾರಿ ಡಾ. ಕುಮಾರ್ ಸೇರಿದಂತೆ ಹಲವು ಹಿರಿಯ ಅಧಿಕಾರಿಗಳು ಮಳವಳ್ಳಿಯ ವಿವಿಧ ಸ್ಥಳಗಳಿಗೆ ಭೇಟಿ ನೀಡಿ ಸಿದ್ಧತೆಗಳನ್ನು ಪರಿಶೀಲಿಸಿದರು. ಅಧಿಕಾರಿಗಳ ತಂಡವು ಮೊದಲು ಮಳವಳ್ಳಿಯ ಹೊರ ಭಾಗದ ಮಾರೇಹಳ್ಳಿ ಬಳಿ ನಿರ್ಮಿಸಲಾಗುತ್ತಿರುವ ತಾತ್ಕಾಲಿಕ ಹೆಲಿಪ್ಯಾಡ್‌ಗೆ ಭೇಟಿ ನೀಡಿತು. ಇಲ್ಲಿ ಕೈಗೊಳ್ಳಬೇಕಾದ ಅಗತ್ಯ ಕ್ರಮಗಳ ಕುರಿತು ಚರ್ಚೆ ನಡೆಸಲಾಯಿತು



ರಾಷ್ಟ್ರಪತಿಗಳ ಹೆಲಿಕಾಪ್ಟರ್ ಸುರಕ್ಷಿತವಾಗಿ ಇಳಿಯಲು ಮತ್ತು ಹಾರಲು ಅನುವಾ ಗುವಂತೆ ಸುತ್ತಮುತ್ತಲಿನ ವಿದ್ಯುತ್ ಕಂಬಗಳು ಮತ್ತು ತಂತಿಗಳನ್ನು ತೆರವುಗೊಳಿಸುವ ಬಗ್ಗೆ ಚರ್ಚಿಸಲಾಯಿತು. ಗ್ರೀನ್ ರೂಂ ನಿರ್ಮಾಣ: ರಾಷ್ಟ್ರಪತಿಗಳು ಮತ್ತು ಇತರ ಗಣ್ಯರು ವಿಶ್ರಾಂತಿ ಪಡೆಯಲು ಅನುಕೂಲವಾಗುವಂತೆ ಹೆಲಿಪ್ಯಾಡ್ ಬಳಿ ಗ್ರೀನ್ ರೂಂ (ವಿಶ್ರಾಂತಿ ಕೊಠಡಿ) ನಿರ್ಮಿಸುವ ಕುರಿತು ಸೂಚನೆ ನೀಡಲಾಯಿತು.

ಮಾರ್ಗ ಸುರಕ್ಷತೆ: ಹೆಲಿಪ್ಯಾಡ್‌ನಿಂದ ಕಾರ್ಯಕ್ರಮದ ವೇದಿಕೆಯವರೆಗೆ ರಾಷ್ಟ್ರಪತಿಗಳು ತೆರಳುವ ಮಾರ್ಗವು ಸಂಪೂರ್ಣ ಸುರಕ್ಷಿ ತವಾಗಿ ಮತ್ತು ಸುಗಮ ವಾಗಿರು ವು ದನ್ನು ಖಚಿತಪಡಿಸಿಕೊಳ್ಳಲಾಯಿತು. ಗಣ್ಯರ ಭೇಟಿ ಹಿನ್ನೆಲೆಯಲ್ಲಿ ವೈದ್ಯಕೀಯ ತುರ್ತು ಸೇವೆಗಳ ಕುರಿತು ಜಿಲ್ಲಾಧಿಕಾರಿ ಡಾ. ಕುಮಾರ್ ಅವರು ವಿಶೇಷ ಗಮನ ಹರಿಸಿ, ಪ್ರವಾಸಿ ಮಂದಿರ ಮತ್ತು ತಾಲೂಕು ಆಸ್ಪತ್ರೆಗೆ ಭೇಟಿ ನೀಡಿ ಆಡಳಿತಾಧಿಕಾರಿಗಳೊಂದಿಗೆ ಸಭೆ ನಡೆಸಿದರು.

ತಾಲೂಕು ಆಸ್ಪತ್ರೆಯಲ್ಲಿ 24 ಗಂಟೆಯೂ ಆರೋಗ್ಯ ಸಿಬ್ಬಂದಿಗಳು ಲಭ್ಯವಿರಬೇಕು ಎಂದು ಜಿಲ್ಲಾಧಿಕಾರಿಗಳು ಕಟ್ಟುನಿಟ್ಟಿನ ಸೂಚನೆ ನೀಡಿದರು. ತುರ್ತು ಚಿಕಿತ್ಸೆಗೆ ಬೇಕಾದ ಎಲ್ಲಾ ಅಗತ್ಯ ವೈದ್ಯಕೀಯ ಉಪಕರಣಗಳು ಮತ್ತು ಔಷಧಿಗಳನ್ನು ಸಿದ್ಧವಾಗಿ ಇರಿಸಲು ಡಾ. ಸಂಜಯ್ ಮತ್ತು ತಾಲೂಕು ವೈದ್ಯಾಧಿಕಾರಿ ಡಾ. ವೀರಭದ್ರಪ್ಪ ಅವರಿಗೆ ನಿರ್ದೇಶನ ನೀಡಲಾಯಿತು. ಯಾವುದೇ ರೀತಿಯ ಅಹಿತಕರ ಅಥವಾ ಆರೋಗ್ಯ ಸಂಬಂಧಿ ತುರ್ತು ಪರಿಸ್ಥಿತಿಯನ್ನು ಎದುರಿಸಲು ಆಸ್ಪತ್ರೆಯು ಸನ್ನದ್ಧವಾಗಿರಬೇಕು ಎಂದು ತಿಳಿಸಲಾಯಿತು.

ಸುತ್ತೂರು ಜಯಂತ್ಯೋತ್ಸವವು ರಾಷ್ಟ್ರಪತಿಗಳ ಜೊತೆಗೆ ಮುಖ್ಯಮಂತ್ರಿಗಳು ಮತ್ತು ರಾಜ್ಯದ ಹಲವು ಸಚಿವರು ಕಾರ್ಯಕ್ರಮಕ್ಕೆ ಆಗಮಿಸಲಿದ್ದಾರೆ. ಈ ಕಾರಣ ದಿಂದಾಗಿ, ಆಡಳಿತಾಧಿಕಾರಿಗಳು ಸಮಗ್ರ ಸಿದ್ಧತೆಗಳನ್ನು ಕೈಗೊಳ್ಳಲಾಗಿದೆ. ಅದರಲ್ಲಿ ಸಾರ್ವಜನಿಕರ ವಾಹನಗಳ ಸುಗಮ ಪಾರ್ಕಿಂಗ್‌ಗಾಗಿ ಸೂಕ್ತ ಸ್ಥಳಗಳನ್ನು ಗುರುತಿಸಿ ವ್ಯವಸ್ಥೆ ಮಾಡಲು ಸೂಚಿಸಲಾಯಿತು. ಗಣ್ಯ ವ್ಯಕ್ತಿಗಳು ಮತ್ತು ಭದ್ರತಾ ಸಿಬ್ಬಂದಿಯ ವಾಸ್ತವ್ಯಕ್ಕಾಗಿ ತಾಲೂಕು ವ್ಯಾಪ್ತಿಯ ಎಲ್ಲಾ ಲಾಡ್ಜ್‌ಗಳು, ಕಲ್ಯಾಣ ಮಂಟಪಗಳು, ರೆಸಾರ್ಟ್‌ಗಳು ಮತ್ತು ರೂಮುಗಳನ್ನು ಕಾಯ್ದಿರಿಸುವಂತೆ ಅಧಿಕಾರಿಗಳಿಗೆ ಸೂಚಿಸಲಾಗಿದೆ. ಕಾನೂನು ಸುವ್ಯವಸ್ಥೆಗೆ ಯಾವುದೇ ತೊಂದರೆ ಆಗದಂತೆ, ಅನಧಿಕೃತ ಫ್ಲೆಕ್ಸ್ ಬ್ಯಾನರ್‌ಗಳ ಅಳವಡಿಕೆಯನ್ನು ನಿಯಂತ್ರಿಸಿ, ಸೂಕ್ತ ಪೊಲೀಸ್ ಬಂದೋಬಸ್ತ್ ವ್ಯವಸ್ಥೆ ಮಾಡಲು ಪೊಲೀಸ್ ಅಧಿಕಾರಿಗಳಿಗೆ ಸಲಹೆ ನೀಡಿದರು.

ವೇದಿಕೆಯ ಬಳಿಯೂ ಪರಿಶೀಲನೆ ನಡೆಸಿದ ಅಧಿಕಾರಿಗಳು, ವೇದಿಕೆಯ ಅಳತೆ, ಗಣ್ಯರ ಆಗಮನದ ಮುಖ್ಯದ್ವಾರದ ನಿರ್ವಹಣೆ, ಊಟದ ವ್ಯವಸ್ಥೆ, ಕುಡಿಯುವ ನೀರಿನ ಪೂರೈಕೆ ಸೇರಿದಂತೆ ಮೂಲಭೂತ ಸೌಲಭ್ಯಗಳ ಬಗ್ಗೆ ಮಾಹಿತಿ ಪಡೆದರು. ಒಟ್ಟಾರೆಯಾಗಿ, ಮಂಡ್ಯ ಜಿಲ್ಲಾಡಳಿತವು ರಾಷ್ಟ್ರಪತಿಗಳ ಐತಿಹಾಸಿಕ ಭೇಟಿಯನ್ನು ಯಶಸ್ವಿಗೊಳಿಸಲು ಬಿಡುವಿಲ್ಲದ ಸಿದ್ಧತೆಗಳಲ್ಲಿ ತೊಡಗಿದೆ.

# ರೈತರಿಗೆ ಮೋಸ ಮಾಡುತ್ತಿರುವುದು ಕೇಂದ್ರ ಸರ್ಕಾರ: ಬಿಜೆಪಿ ಪ್ರತಿಭಟನೆಗೆ ಡಿ.ಕೆ. ಶಿವಕುಮಾರ್ ತಿರುಗೇಟು



**ಬೆಳಗಾವಿ:** ವಿಧಾನಮಂಡಲ ಚಳಿಗಾಲದ ಅಧಿವೇಶನ ಇಂದು ಎರಡನೇ ದಿನಕ್ಕೆ ಕಾಲಿಟ್ಟಿದ್ದು, ಸರ್ಕಾರವು ಒಂಭತ್ತು ಸಂಘಟನೆಗಳ ಪ್ರತಿಭಟನೆಗಳ ಸವಾಲನ್ನು ಎದುರಿಸುತ್ತಿದೆ. ಇದರ ಜೊತೆಗೆ, ವಿರೋಧ ಪಕ್ಷವಾದ ಬಿಜೆಪಿ (BJP) ರೈತರ ಸಮಸ್ಯೆಗಳನ್ನು ಮುಂದಿಟ್ಟು ಕೊಂಡು ಬೃಹತ್ ಹೋರಾಟಕ್ಕೆ ಸಜ್ಜಾಗಿದೆ. ಬಿಜೆಪಿ ನಾಯಕರು ಸುವರ್ಣ ವಿಧಾನಸೌಧಕ್ಕೆ ಮುತ್ತಿಗೆ ಹಾಕುವುದಾಗಿ ಎಚ್ಚರಿಕೆ ನೀಡಿರುವುದು ರಾಜಕೀಯ ವಲಯದಲ್ಲಿ ತೀವ್ರ ಕುತೂಹಲ ಮೂಡಿಸಿದೆ.

ವಿಪಕ್ಷಗಳ ಈ ಪ್ರತಿಭಟನೆಗಳ ನಡುವೆಯೇ, ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು ಈ ಬೆಳವಣಿಗೆಗಳ ಬಗ್ಗೆ ತೀಕ್ಷ್ಣವಾಗಿ ಪ್ರತಿಕ್ರಿಯಿಸಿದ್ದಾರೆ. ಬೆಳಗಾವಿಯ ಸಾಂಬ್ರಾ ವಿಮಾನ ನಿಲ್ದಾಣದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಸರ್ಕಾರದ ವಿರುದ್ಧ ಹೋರಾಟ ಮಾಡುವ ಬದಲು, ರೈತರ ಸಮಸ್ಯೆಗಳಿಗೆ ಕಾರಣವಾಗಿರುವ ಕೇಂದ್ರ ಸರ್ಕಾರದ ವಿರುದ್ಧ ಹೋರಾಟ ಮಾಡಲಿ ಎಂದು ಬಿಜೆಪಿಗೆ ಸವಾಲು ಹಾಕಿದ್ದಾರೆ. ಚಳಿಗಾಲದ ಅಧಿವೇಶನ ಆರಂಭವಾಗಿರುವ ಈ ಸಂದರ್ಭದಲ್ಲಿ ರೈತರ ಹೋರಾಟವನ್ನು ರಾಜಕೀಯ ಅಸ್ತ್ರವನ್ನಾಗಿ ಬಳಸುತ್ತಿರುವ ಬಿಜೆಪಿಯ ಕ್ರಮವನ್ನು ಡಿಸಿಎಂ ಖಂಡಿಸಿದರು. ರೈತರಿಗೆ ಮೋಸ ಮಾಡುತ್ತಿರುವುದು ಕೇಂದ್ರ ಸರಕಾರ. ರಾಜ್ಯದ ಅನ್ನ ದಾತರು ಎದುರಿಸುತ್ತಿರುವ ಸಮಸ್ಯೆಗಳಿಗೆ, ಸಂಕಷ್ಟಗಳಿಗೆ ಪರಿಹಾರ ನೀಡದಿರುವುದು ಕೇಂದ್ರದ ನೀತಿಗಳೇ ಕಾರಣ ಎಂದು ಡಿ.ಕೆ. ಶಿವಕುಮಾರ್ ನೇರ ವಾಗ್ದಾಳಿ ನಡೆಸಿದರು.

ರೈತರ ಬೆಳೆಗಳ ಖರೀದಿ ಕುರಿತು ಮಾತನಾಡಿದ ಅವರು, ಕೇಂದ್ರ ಸರಕಾರವು ರೈತರ ಬೆಳೆಗಳನ್ನು ಸರಿಯಾದ ರೀತಿಯಲ್ಲಿ ಖರೀದಿ ಮಾಡುತ್ತಿಲ್ಲ. ರಾಜ್ಯದ ರೈತರ ಹಿತಾಸಕ್ತಿ ನಿಜವಾಗಿಯೂ ಬಿಜೆಪಿಯವರಿಗೆ ಮುಖ್ಯವಾಗಿದ್ದರೆ, ಅವರು ತಕ್ಷಣವೇ ತಮ್ಮದೇ ಪಕ್ಷದ ನಾಯಕರಾದ ಪ್ರಧಾನಿ ಮತ್ತು ಸಂಬಂಧಿತ ಕೇಂದ್ರ ಸಚಿವರ ಮೇಲೆ ಖರೀದಿ ಮಾಡುವಂತೆ ಒತ್ತಾಯ ಮಾಡಬೇಕು ಎಂದು ಆಗ್ರಹಿಸಿದರು.


ಅಲ್ಲದೆ, ರಾಜ್ಯ ಸರ್ಕಾರವು ರೈತರಿಗೆ ಪರಿಹಾರ ನೀಡಲು ಮುಂದಾದಾಗ, ಕೇಂದ್ರದಿಂದ ಬರಬೇಕಾದ ಅನುದಾನದ ಕುರಿತು ಪ್ರಸ್ತಾಪಿಸಿದರು. ಕೇಂದ್ರ ಸರಕಾರ ರಾಜ್ಯಕ್ಕೆ ಕೊಡಬೇಕಿರುವ ಬಾಕಿ ಹಣವನ್ನು ತಕ್ಷಣವೇ ಬಿಡುಗಡೆ ಮಾಡಬೇಕು. ರೈತರಿಗೆ ಪರಿಹಾರ ನೀಡುವ ನಿಟ್ಟಿನಲ್ಲಿ ಅಗತ್ಯವಿರುವ ಅನುದಾನವನ್ನು ತಡಮಾಡದೇ ಬಿಡುಗಡೆಗೊಳಿಸಲಿ. ಆಗ ರೈತರ ಸಮಸ್ಯೆಗಳು ಪರಿಹಾರವಾಗುತ್ತವೆ ಎಂದು ಅವರು ಆಗ್ರಹಿಸಿದರು. ಬಿಜೆಪಿ ಪ್ರತಿಭಟನೆಯ ಆಧಾರವು ದುರ್ಬಲವಾಗಿದೆ ಎಂದು ಪ್ರತಿಪಾದಿಸಿದ ಡಿಸಿಎಂ, ರಾಜ್ಯ ಸರ್ಕಾರವು ರೈತರ ಪರವಾಗಿ ನಿಂತಿದೆ ಎಂದು ಸಮರ್ಥಿಸಿಕೊಂಡರು. ನಾವು ರೈತರ ಪರವಾಗಿ ಇದ್ದೇವೆ. ಕಬ್ಬು, ಮೆಕ್ಕೆಜೋಳದ ಖರೀದಿ ಪ್ರಕ್ರಿಯೆಯನ್ನು ರಾಜ್ಯ ಸರಕಾರವೇ ಆರಂಭ ಮಾಡಿದೆ. ನಾವು ಇಂತಿಷ್ಟು ಬೆಳೆಗಳನ್ನು ಖರೀದಿ ಮಾಡಬೇಕು ಎಂದು ಈಗಾಗಲೇ ಆದೇಶವನ್ನು ಹೊರಡಿಸಿದ್ದೇವೆ ಎಂದು ತಿಳಿಸಿದರು.

ಆದರೆ, ಇಲ್ಲಿನ ಮೂಲಭೂತ ಸಮಸ್ಯೆ ಎಂದರೆ ಎಂ.ಆರ್.ಪಿ ಬೆಲೆಯನ್ನು ನಿಗದಿಪಡಿಸುವುದು ಕೇಂದ್ರ ಸರಕಾರ. ಕನಿಷ್ಠ ಬೆಂಬಲ ಬೆಲೆ ಮತ್ತು ಮಾರುಕಟ್ಟೆ ನಿಯಂತ್ರಣವು ಹೆಚ್ಚಾಗಿ ಕೇಂದ್ರದ ನೀತಿಗಳ ಮೇಲೆ ಅವಲಂಬಿತವಾಗಿರುತ್ತದೆ. ಈ ಹಿನ್ನೆಲೆಯಲ್ಲಿ, ಬಿಜೆಪಿಯವರು ಹೋರಾಟ ಮಾಡಬೇಕಾಗಿದ್ದು ನಮ್ಮ ರಾಜ್ಯ ಸರ್ಕಾರದ ವಿರುದ್ಧವಲ್ಲ, ಕೇಂದ್ರ ಸರಕಾರದ ವಿರುದ್ಧ ಎಂದು ಡಿಕೆಶಿ ಟಾಂಗ್ ಕೊಟ್ಟರು.

ಡಿಸಿಎಂ ಡಿ.ಕೆ. ಶಿವಕುಮಾರ್ ಅವರು ಬಿಜೆಪಿಯತ್ತ ಗುಡುಗುತ್ತಾ, ವಿಪಕ್ಷಗಳು ಕೇವಲ ರಾಜಕೀಯ ಲಾಭಕ್ಕಾಗಿ ರೈತರ ಸಮಸ್ಯೆಗಳನ್ನು ಬಳಸಿಕೊಳ್ಳುತ್ತಿವೆ ಎಂದು ಆರೋಪಿಸಿದರು. ರೈತರಿಗೆ ಅನ್ಯಾಯ ಮಾಡುತ್ತಿರುವುದು ಕೇಂದ್ರ ಸರ್ಕಾರದ ನೀತಿಗಳು ಮತ್ತು ಅನುದಾನ ಬಿಡುಗಡೆ ಮಾಡದಿರುವ ನಿರ್ಧಾರಗಳು. ಹೀಗಾಗಿ, ಬಿಜೆಪಿಯವರು ನಿಜವಾದ ಕಾಳಜಿ ಇದ್ದರೆ ರೈತರಿಗೆ ಅನ್ಯಾಯ ಮಾಡುತ್ತಿರುವ ಕೇಂದ್ರ ಸರ್ಕಾರದ ವಿರುದ್ಧ ಹೋರಾಡಲಿ, ನಮ್ಮ ವಿರುದ್ಧ, ರಾಜ್ಯ ಸರ್ಕಾರದ ವಿರುದ್ಧ ಹೋರಾಡುವುದಲ್ಲ ಎಂದು ಹೇಳಿದರು.

ಅವರ ಈ ಹೇಳಿಕೆಗಳು ಬೆಳಗಾವಿ ಅಧಿವೇಶನದ ಎರಡನೇ ದಿನದಲ್ಲಿ ರಾಜಕೀಯ ಜಿದ್ದಾಜಿದ್ದಿಯನ್ನು ಮತ್ತಷ್ಟು ಹೆಚ್ಚಿಸಿದ್ದು, ಅಧಿವೇಶನದ ಮುಂದಿನ ದಿನಗಳಲ್ಲಿ ಆಡಳಿತ ಮತ್ತು ವಿರೋಧ ಪಕ್ಷಗಳ ನಡುವೆ ರೈತರ ಸಮಸ್ಯೆಗಳ ಕುರಿತು ತೀವ್ರ ಚರ್ಚೆ ಮತ್ತು ವಾಗ್ವಾದ ನಡೆಯುವ ಸಾಧ್ಯತೆ ಇದೆ.

# ಭಾರತದ ಮೇಲೆ ಹೊಸ ಸುಂಕ: ಡೊನಾಲ್ಡ್ ಟ್ರಂಪ್ ಎಚ್ಚರಿಕೆ



ವಾಷಿಂಗ್ಟನ್‌ನಿಂದ ಬಂದಿರುವ ಇತ್ತೀಚಿನ ವರದಿಗಳ ಪ್ರಕಾರ, ಅಮೆರಿಕದ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರು ಭಾರತದ ಮೇಲೆ ಮತ್ತೊಮ್ಮೆ ಹೊಸ ಸುಂಕಗಳನ್ನು ಹೇರುವ ಎಚ್ಚರಿಕೆ ನೀಡಿದ್ದಾರೆ. ಟ್ರಂಪ್ ಆಡಳಿತದ ಅವಧಿಯಲ್ಲಿಯೇ ಪ್ರಾರಂಭವಾಗಿದ್ದ ವ್ಯಾಪಾರ ಸಮರದ ಮಾತುಕತೆಗಳು ಮತ್ತು ಹೊಸ ಸುಂಕಗಳ ಬೆದರಿಕೆಗಳು ಈಗಲೂ ಮುಂದುವರೆದಿವೆ. ಎರಡು ಪ್ರಮುಖ ದೇಶಗಳ ನಡುವಿನ ವ್ಯಾಪಾರ ಮಾತುಕತೆಗಳಲ್ಲಿ ಯಾವುದೇ ಗಮನಾರ್ಹ ಪ್ರಗತಿ ಕಂಡುಬಂದಿಲ್ಲ ಎಂಬ ಅಂಶವನ್ನು ಉಲ್ಲೇಖಿಸಿ ಟ್ರಂಪ್ ಈ ನಿರ್ಧಾರವನ್ನು ಪುನರುಚ್ಚರಿಸಿದ್ದಾರೆ.

ಟ್ರಂಪ್ ಅವರ ಈ ಹೊಸ ಎಚ್ಚರಿಕೆಯು ನಿರ್ದಿಷ್ಟವಾಗಿ ಕೃಷಿ ಆಮದಿನ ಮೇಲೆ ಕೇಂದ್ರೀಕೃತವಾಗಿದೆ. ಭಾರತದಿಂದ ಆಮದಾಗುವ ಅಕ್ಕಿ ಮತ್ತು ಕೆನಡಾದಿಂದ ಆಮದಾಗುವ ರಸಗೊಬ್ಬರಗಳಂತಹ ವಸ್ತುಗಳ ಮೇಲೆ ಹೊಸ ಮತ್ತು ಗಣನೀಯ ಸುಂಕಗಳನ್ನು ವಿಧಿಸುವುದಾಗಿ ಅವರು ಸ್ಪಷ್ಟಪಡಿಸಿದ್ದಾರೆ. ಅಮೆರಿಕದ ದೇಶೀಯ ಕೃಷಿ ಉತ್ಪಾದಕರನ್ನು ರಕ್ಷಿಸುವ ಉದ್ದೇಶದಿಂದ ಈ ಕ್ರಮ ತೆಗೆದುಕೊಳ್ಳಲಾಗುತ್ತಿದೆ ಎಂದು ಟ್ರಂಪ್ ಸಮರ್ಥಿಸಿಕೊಂಡಿದ್ದಾರೆ. ಶ್ವೇತಭವನದಲ್ಲಿ ನಡೆದ ಸಭೆಯೊಂದರಲ್ಲಿ ಟ್ರಂಪ್ ಅವರು ಈ ಪ್ರಮುಖ ಹೇಳಿಕೆಗಳನ್ನು ನೀಡಿದ್ದಾರೆ

. ಈ ಸಭೆಯ ಮುಖ್ಯ ಉದ್ದೇಶ ಅಮೆರಿಕದ ರೈತರಿಗೆ ಬಹು-ಶತಕೋಟಿ ಡಾಲರ್‌ಗಳ ಕೃಷಿ ಪರಿಹಾರ ಪ್ಯಾಕೇಜ್ ಅನ್ನು ಪರಿಚಯಿಸುವುದಾಗಿತ್ತು. ಈ ಸಂದರ್ಭದಲ್ಲಿ ಟ್ರಂಪ್ ಅವರು ಭಾರತ ಮತ್ತು ಇತರ ಏಷ್ಯಾದ ಪೂರೈಕೆದಾರರಿಂದ ಬರುವ ಕೃಷಿ ಆಮದಿನ ಬಗ್ಗೆ ತಮ್ಮ ಟೀಕೆಗಳನ್ನು ತೀವ್ರಗೊಳಿಸಿದರು.

ವಿದೇಶಿ ಆಮ ದುಗಳು ನಮ್ಮ ದೇಶೀಯ ಉತ್ಪಾದಕರಿಗೆ ಸವಾಲನ್ನು ಒಡ್ಡುತ್ತಿವೆ. ಅಮೆರಿಕನ್ ರೈತರು ಕಷ್ಟಪಟ್ಟು ಬೆಳೆದ ಉತ್ಪನ್ನಗಳಿಗಿಂತ ಅಗ್ಗದ ಆಮದುಗಳು ಮಾರುಕಟ್ಟೆಯಲ್ಲಿ ತುಂಬಿಕೊಂಡಿವೆ ಎಂದು ಟ್ರಂಪ್ ಟೀಕಿಸಿದ್ದಾರೆ. ಅಮೆರಿಕನ್ ಉತ್ಪಾದಕರ ಹಿತಾಸಕ್ತಿಗಳನ್ನು ರಕ್ಷಿಸಲು, ತಾವು ಈ ಆಮದುಗಳ ಮೇಲೆ ಸುಂಕಗಳನ್ನು ಆಕ್ರಮಣಕಾರಿಯಾಗಿ ಬಳಸುವ ಮೂಲಕ ಸಮಸ್ಯೆಯನ್ನು ಪರಿಹರಿಸುವ ದೃಢ ಉದ್ದೇಶ ಹೊಂದಿರುವುದಾಗಿ ಟ್ರಂಪ್ ಸಭೆಯಲ್ಲಿ ತಿಳಿಸಿದರು.


ಈ ಸಭೆಯಲ್ಲಿ ರೈತರು, ಶಾಸಕರು ಮತ್ತು ಉನ್ನತ ಕ್ಯಾಬಿನೆಟ್ ಅಧಿಕಾರಿಗಳು ಭಾಗವಹಿಸಿದ್ದರು. ಟ್ರಂಪ್ ಅವರು ಅಮೆರಿಕದ ರೈತರಿಗೆ ಒಟ್ಟು 12 ಬಿಲಿಯನ್ ಡಾಲರ್ (ಸುಮಾರು 99 ಸಾವಿರ ಕೋಟಿ ರೂಪಾಯಿಗಳು) ಆರ್ಥಿಕ ಸಹಾಯವನ್ನು ಘೋಷಿಸಿದರು. ಈ ಆರ್ಥಿಕ ನೆರವನ್ನು ಅಮೆರಿಕವು ತನ್ನ ವ್ಯಾಪಾರ ಪಾಲುದಾರರಿಂದ ಸಂಗ್ರಹಿಸುತ್ತಿರುವ ಸುಂಕದ ಆದಾಯದಿಂದ ಹಣವನ್ನು ಪಡೆಯುತ್ತದೆ ಎಂದು ವಿವರಿಸಿದ್ದಾರೆ. ಅಂದರೆ, ಹೊಸದಾಗಿ ವಿಧಿಸಲಾಗುವ ಸುಂಕಗಳಿಂದ ಬರುವ ಆದಾಯವನ್ನೇ ದೇಶೀಯ ರೈತರ ನೆರವಿಗಾಗಿ ಬಳಸಲಾಗುತ್ತದೆ ಎಂಬುದು ಟ್ರಂಪ್ ಆಡಳಿತದ ತಂತ್ರವಾಗಿದೆ. ಶ್ವೇತಭವನದಲ್ಲಿ ನಡೆದ ಸಭೆಯೊಂದರಲ್ಲಿ ಟ್ರಂಪ್ ಅವರು ಈ ಪ್ರಮುಖ ಹೇಳಿಕೆಗಳನ್ನು ನೀಡಿದ್ದಾರೆ.

ಈ ಸಭೆಯ ಮುಖ್ಯ ಉದ್ದೇಶ ಅಮೆರಿಕದ ರೈತರಿಗೆ ಬಹು-ಶತಕೋಟಿ ಡಾಲರ್‌ಗಳ ಕೃಷಿ ಪರಿಹಾರ ಪ್ಯಾಕೇಜ್ ಅನ್ನು ಪರಿಚಯಿಸುವುದಾಗಿತ್ತು. ಈ ಸಂದರ್ಭದಲ್ಲಿ ಟ್ರಂಪ್ ಅವರು ಭಾರತ ಮತ್ತು ಇತರ ಏಷ್ಯಾದ ಪೂರೈಕೆದಾರರಿಂದ ಬರುವ ಕೃಷಿ ಆಮದಿನ ಬಗ್ಗೆ ತಮ್ಮ ಟೀಕೆಗಳನ್ನು ತೀವ್ರಗೊಳಿಸಿದರು.

ವಿದೇಶಿ ಆಮದುಗಳು ನಮ್ಮ ದೇಶೀಯ ಉತ್ಪಾದಕರಿಗೆ ಸವಾಲನ್ನು ಒಡ್ಡುತ್ತಿವೆ. ಅಮೆರಿಕನ್ ರೈತರು ಕಷ್ಟಪಟ್ಟು ಬೆಳೆದ ಉತ್ಪನ್ನಗಳಿಗಿಂತ ಅಗ್ಗದ ಆಮದುಗಳು ಮಾರುಕಟ್ಟೆಯಲ್ಲಿ ತುಂಬಿಕೊಂಡಿವೆ ಎಂದು ಟ್ರಂಪ್ ಟೀಕಿಸಿದ್ದಾರೆ. ಅಮೆರಿಕನ್ ಉತ್ಪಾದಕರ ಹಿತಾಸಕ್ತಿಗಳನ್ನು ರಕ್ಷಿಸಲು, ತಾವು ಈ ಆಮದುಗಳ ಮೇಲೆ ಸುಂಕಗಳನ್ನು ಆಕ್ರಮಣಕಾರಿಯಾಗಿ ಬಳಸುವ ಮೂಲಕ ಸಮಸ್ಯೆಯನ್ನು ಪರಿಹರಿಸುವ ದೃಢ ಉದ್ದೇಶ ಹೊಂದಿರುವುದಾಗಿ ಟ್ರಂಪ್ ಸಭೆಯಲ್ಲಿ ತಿಳಿಸಿದರು.

ಈ ಸಭೆಯಲ್ಲಿ ರೈತರು, ಶಾಸಕರು ಮತ್ತು ಉನ್ನತ ಕ್ಯಾಬಿನೆಟ್ ಅಧಿಕಾರಿಗಳು ಭಾಗವಹಿಸಿದ್ದರು. ಟ್ರಂಪ್ ಅವರು ಅಮೆರಿಕದ ರೈತರಿಗೆ ಒಟ್ಟು 12 ಬಿಲಿಯನ್ ಡಾಲರ್ (ಸುಮಾರು 99 ಸಾವಿರ ಕೋಟಿ ರೂಪಾಯಿಗಳು) ಆರ್ಥಿಕ ಸಹಾಯವನ್ನು ಘೋಷಿಸಿದರು. ಈ ಆರ್ಥಿಕ ನೆರವನ್ನು ಅಮೆರಿಕವು ತನ್ನ ವ್ಯಾಪಾರ ಪಾಲುದಾರರಿಂದ ಸಂಗ್ರಹಿಸುತ್ತಿರುವ ಸುಂಕದ ಆದಾಯದಿಂದ ಹಣವನ್ನು ಪಡೆಯುತ್ತದೆ ಎಂದು ವಿವರಿಸಿದ್ದಾರೆ. ಅಂದರೆ, ಹೊಸದಾಗಿ ವಿಧಿಸಲಾಗುವ ಸುಂಕಗಳಿಂದ ಬರುವ ಆದಾಯವನ್ನೇ ದೇಶೀಯ ರೈತರ ನೆರವಿಗಾಗಿ ಬಳಸಲಾಗುತ್ತದೆ ಎಂಬುದು ಟ್ರಂಪ್ ಆಡಳಿತದ ತಂತ್ರವಾಗಿದೆ.

# ಋತುಚಕ್ರ ರಜೆ ಆದೇಶಕ್ಕೆ ಹೈಕೋರ್ಟ್ ತಡೆ: ರಾಜ್ಯ ಸರ್ಕಾರಕ್ಕೆ ಹಿನ್ನಡೆ



**ಬೆಂಗಳೂರು:** ಮಹಿಳಾ ಕಾರ್ಮಿಕರಿಗೆ ಸಂಬಂಧಿಸಿದಂತೆ ರಾಜ್ಯ ಸರ್ಕಾರವು ನವೆಂಬರ್ 20 ರಂದು ಹೊರಡಿಸಿದ್ದ ಒಂದು ದಿನದ ಋತುಚಕ್ರ ರಜೆಯಆದೇಶಕ್ಕೆ ಕರ್ನಾಟಕ ಹೈಕೋರ್ಟ್ ಇದೀಗ ತಡೆಯಾಜ್ಞೆ ನೀಡಿದೆ. ನ್ಯಾಯಮೂರ್ತಿ ಜ್ಯೋತಿ ಮೂಲಿಮನಿ ಅವರಿದ್ದ ಏಕ ಸದಸ್ಯ ಪೀಠವು ಸರ್ಕಾರದ ಈ ಆದೇಶವನ್ನು ಪ್ರಶ್ನಿಸಿ ಸಲ್ಲಿಸಲಾಗಿದ್ದ ಅರ್ಜಿಯ ವಿಚಾರಣೆ ನಡೆಸಿ, ಈ ಮಹತ್ವದ ಮಧ್ಯಂತರ ತಡೆಯಾಜ್ಞೆ ನೀಡಿದೆ.

ಋತುಚಕ್ರದ ಸಂದರ್ಭದಲ್ಲಿ ಮಹಿಳಾ ಉದ್ಯೋಗಿಗಳಿಗೆ ಒಂದು ದಿನದ ವೇತನ ಸಹಿತ ರಜೆ ನೀಡಬೇಕು ಎಂದು ರಾಜ್ಯ ಸರ್ಕಾರವು ಕಾರ್ಖಾನೆಗಳು ಮತ್ತು ವಾಣಿಜ್ಯ ಸಂಸ್ಥೆಗಳ ಅಡಿಯಲ್ಲಿ ಬರುವ ಎಲ್ಲಾ ಸಂಸ್ಥೆಗಳಿಗೆ ಆದೇಶ ಹೊರಡಿಸಿತ್ತು. ಸರ್ಕಾರದ ಈ ನಿರ್ಧಾರವು ಮಹಿಳಾ ಸಬಲೀಕರಣದ ದೃಷ್ಟಿಯಿಂದ ಪ್ರಗತಿಪರ ಹೆಜ್ಜೆಯಾಗಿದೆ ಎಂದು ವ್ಯಾಪಕ ಮೆಚ್ಚುಗೆ ಗಳಿಸಿತ್ತಾದರೂ, ಈ ಆದೇಶದ ಕ್ರಮಬದ್ಧತೆಯ ಕುರಿತು ಆಕ್ಷೇಪಣೆಗಳು ವ್ಯಕ್ತವಾಗಿದ್ದವು.

ರಾಜ್ಯ ಸರ್ಕಾರದ ಈ ಆದೇಶವನ್ನು ಪ್ರಶ್ನಿಸಿ ಬೆಂಗಳೂರು ಹೋಟೆಲ್ ಮಾಲೀಕರ ಸಂಘ ಹೈಕೋರ್ಟ್‌ಗೆ ಅರ್ಜಿ ಸಲ್ಲಿಸಿತ್ತು. ಸರ್ಕಾರದ ಏಕ ಪಕ್ಷೀಯ ನಿರ್ಧಾರದಿಂದಾಗಿ ತಮ್ಮ ವಾಣಿಜ್ಯ ಸಂಸ್ಥೆಗಳ ಮೇಲೆ ಆಗುವ ಪರಿಣಾಮಗಳ ಕುರಿತು ಸಂಘವು ಆಕ್ಷೇಪ ವ್ಯಕ್ತಪಡಿಸಿತ್ತು. ನ್ಯಾಯಮೂರ್ತಿ ಜ್ಯೋತಿ ಮೂಲಿಮನಿ ಅವರ ಪೀಠದ ಮುಂದೆ ಈ ಅರ್ಜಿಯ ವಿಚಾರಣೆ ನಡೆದಾಗ, ಅರ್ಜಿದಾರರ ಪರ ವಕೀಲರು ಸರ್ಕಾರದ ಆದೇಶವನ್ನು ತೀವ್ರವಾಗಿ ಪ್ರಶ್ನಿಸಿದರು. ವಕೀಲರು ವಾದ ಮಂಡಿಸುತ್ತಾ, ರಾಜ್ಯ ಸರ್ಕಾರವು ಈ ಆದೇಶವನ್ನು ಹೊರಡಿಸಲು ಯಾವುದೇ ಕಾಯ್ದೆಯಲ್ಲಿ ಇಲ್ಲದ ನಿಯಮವನ್ನು ಸರ್ಕಾರಿ ಆದೇಶದ ಮೂಲಕ ಜಾರಿಗೊಳಿಸಿದೆ. ಇದು ಕಾನೂನಿನ ಪ್ರಕ್ರಿಯೆಗೆ ವಿರುದ್ಧವಾಗಿದೆ ಎಂದು ತಿಳಿಸಿದರು.


ಅಲ್ಲದೆ, ಸರ್ಕಾರದ ಈ ಏಕಪಕ್ಷೀಯ ಆದೇಶದಿಂದಾಗಿ ಹೋಟೆಲ್ ಮತ್ತು ವಾಣಿಜ್ಯ ಸಂಸ್ಥೆಗಳಿಗೆ ತೀವ್ರ ಸಮಸ್ಯೆ ಎದುರಾಗಿದೆ. ನಿರ್ದಿಷ್ಟವಾಗಿ ಹೇಳುವುದಾದರೆ, ಸಣ್ಣ ಮತ್ತು ಮಧ್ಯಮ ಸಂಸ್ಥೆಗಳ ಮೇಲೆ ಇದು ಆರ್ಥಿಕ ಮತ್ತು ನಿರ್ವಹಣಾ ಹೊರೆ ಹೆಚ್ಚಿಸುತ್ತದೆ ಎಂದು ವಾದಿಸಿದರು.

ವಾದ-ಪ್ರತಿವಾ ದಗಳನ್ನು ಆಲಿ ಸಿದ ನ್ಯಾ ಯಮೂರ್ತಿ ಜ್ಯೋತಿ ಮೂಲಿ ಮನಿ ಅವರು, ಸರ್ಕಾರದ ಆದೇಶದ ಪ್ರಕ್ರಿಯೆಯ ಕುರಿತು ಮಹತ್ವದ ಪ್ರಶ್ನೆಯನ್ನು ಎತ್ತಿದರು. ಸರ್ಕಾರವು ಈ ಮಹತ್ವದ ಆದೇಶವನ್ನು ಹೊರಡಿಸುವ ಮೊದಲು, ಹೋಟೆಲ್ ಮಾಲೀಕರು ಮತ್ತು ಇತರ ವಾಣಿಜ್ಯ ಸಂಘಟನೆಗಳ ಅಭಿಪ್ರಾ ಯವನ್ನು ಪಡೆಯಲಾಗಿತ್ತೇ?" ಎಂದು ನ್ಯಾಯಾಧೀಶರು ಪ್ರಶ್ನಿಸಿದರು. ಇದಕ್ಕೆ ತಕ್ಷಣವೇ ಉತ್ತರಿಸಿದ ಅಸೋಸಿಯೇಷನ್ ಪರ ವಕೀಲರು, "ಇಲ್ಲ" ಎಂದು ಸ್ಪಷ್ಟಪಡಿಸಿದರು. ಅಂದರೆ, ಆದೇಶ ಜಾರಿಗೊಳಿಸುವ ಮೊದಲು ಬಾಧಿತರಾಗುವ ವಲಯಗಳೊಂದಿಗೆ ಸರ್ಕಾರ ಸಮಾಲೋಚನೆ ನಡೆಸಿಲ್ಲ ಎಂಬುದು ಖಚಿತವಾಯಿತು.

ಸಂಬಂಧಪಟ್ಟ ಪಕ್ಷಗಳ ಅಭಿಪ್ರಾಯಗಳನ್ನು ಪಡೆಯದೆ ಮತ್ತು ಕಾಯ್ದೆಯಲ್ಲಿ ಅವಕಾಶವಿಲ್ಲದ ವಿಷಯವನ್ನು ಏಕಪಕ್ಷೀಯ ಆದೇಶದ ಮೂಲಕ ಜಾರಿಗೊಳಿಸಿರುವುದು ಪ್ರಕ್ರಿಯೆಯ ಲೋಪ ಎಂದು ಪರಿಗಣಿಸಿದ ಹೈಕೋರ್ಟ್ ಪೀಠವು, ರಾಜ್ಯ ಸರ್ಕಾರದ ಋತುಚಕ್ರ ರಜೆ ಆದೇಶಕ್ಕೆ ತಕ್ಷಣವೇ ತಡೆ ನೀಡಿತು.

ಹೈಕೋರ್ಟ್ ಮಧ್ಯಂತರ ತಡೆಯಾಜ್ಞೆ ನೀಡಿದ ನಂತರ, ಮುಂದಿನ ವಿಚಾರಣೆ ನಡೆಯುವವರೆಗೆ ಸರ್ಕಾರವು ಈ ರಜೆಯ ಆದೇಶವನ್ನು ಜಾರಿಗೊಳಿಸುವಂತಿಲ್ಲ. ಆದಾಗ್ಯೂ, ಹೈಕೋರ್ಟ್ ಏಕ ಸದಸ್ಯ ಪೀಠವು ಈ ವೇಳೆ ರಾಜ್ಯ ಸರ್ಕಾರಕ್ಕೆ ಒಂದು ಅವಕಾಶವನ್ನು ನೀಡಿದೆ. ರಾಜ್ಯ ಸರ್ಕಾರವು ಈ ಮಧ್ಯಂತರ ತಡೆಯಾಜ್ಞೆ ತೆರವಿಗೆ ಅರ್ಜಿ ಸಲ್ಲಿಸಲು ಸ್ವತಂತ್ರವಾಗಿದೆ ಎಂದು ಹೈಕೋರ್ಟ್ ಅಭಿಪ್ರಾಯಪಟ್ಟಿದೆ. ಅಂದರೆ, ಸರ್ಕಾರವು ಸೂಕ್ತ ದಾಖಲೆಗಳೊಂದಿಗೆ ಮತ್ತು ಕಾನೂನು ಪ್ರಕಾರದ ಸಮರ್ಥನೆ ಯೊಂದಿಗೆ ಹೈಕೋರ್ಟ್‌ನಲ್ಲಿ ಮನವಿ ಸಲ್ಲಿಸಿ ಈ ತಡೆಯಾಜ್ಞೆಯನ್ನು ತೆರವುಗೊ ಳಿಸಲು ಪ್ರಯತ್ನಿಸಬಹುದು.

# 30ಕ್ಕೂ ಹೆಚ್ಚು ಕೃಷ್ಣಮೃಗಗಳ ಸಾವಿಗೆ ಸಾಂಕ್ರಾಮಿಕ ರೋಗ ಕಾರಣ: ಖಂಡ್ರೆ



**ಬೆಳಗಾವಿ:** ಸುವರ್ಣ ಸೌಧದಲ್ಲಿ ನಡೆಯುತ್ತಿರುವ ವಿಧಾನಮಂಡಲ ಅಧಿವೇಶನದಲ್ಲಿ, ಕಿತ್ತೂರು ರಾಣಿ ಚನ್ನಮ್ಮ ಕಿರು ಮೃಗಾಲಯದಲ್ಲಿ ಸಂಭವಿಸಿದ ಕೃಷ್ಣಮೃಗಗಳ ಸಾಮೂಹಿಕ ಸಾವಿನ ಕುರಿತು ಪ್ರಮುಖ ಮಾಹಿತಿಯನ್ನು ತಿಳಿಸಲಾಗಿದೆ.

ಅನಾವರಣಗೊಳಿಸಲಾಯಿತು. ಅರಣ್ಯ ಸಚಿವ ಈಶ್ವರ ಖಂಡ್ರೆ, ಈ ಬಗ್ಗೆ ಸ್ಪಷ್ಟೀಕರಣ ನೀಡಿದ್ದು, ಒಟ್ಟು 30ಕ್ಕೂ ಹೆಚ್ಚು ಕೃಷ್ಣಮೃಗಗಳು ಮೃತಪಡಲು ಸಾಂಕ್ರಾಮಿಕ ರೋಗವೇ ಕಾರಣ ಎಂದು ಸದನಕ್ಕೆ ತಿಳಿಸಿದರು.

ವಿಧಾನ ಪರಿಷತ್ ಸದಸ್ಯ ತಳವಾರ್ ಸಾಬಣ್ಣ ಅವರು ಕೇಳಿದ ಚುಕ್ಕೆ ಗುರುತಿನ ಪ್ರಶ್ನೆಗೆ ಉತ್ತರಿಸಿದ ಸಚಿವರು, ಈ ಘಟನೆಯ ಸಂಪೂರ್ಣ ವಿವರಗಳನ್ನು ಪ್ರಸ್ತುತಪಡಿಸಿದರು. ಮೃತಪಟ್ಟ ಕೃಷ್ಣಮೃಗಗಳ ಪ್ರಯೋಗಾಲಯದ ವರದಿಗಳು ಬಂದಿದ್ದು, ಅವುಗಳು 'ಹೆಮರಾಜಿಕ್ ಸೆಪ್ಟಿಸೆಮಿಯಾ' ಎಂಬ ತೀವ್ರ ಸಾಂಕ್ರಾಮಿಕ ರೋಗದಿಂದ ಸಾವಿಗೀಡಾಗಿವೆ ಎಂದು ದೃಢಪಟ್ಟಿದೆ. ಕರ್ತವ್ಯ ನಿರ್ಲಕ್ಷ್ಯವಲ್ಲ, ರೋಗವೇ ಮುಖ್ಯ ಕಾರಣ ಪ್ರಯೋಗಾಲಯದ ದೃಢೀಕರಣದ ಹಿನ್ನೆಲೆಯಲ್ಲಿ, ಮೃಗಾಲಯದ ಅಧಿಕಾರಿಗಳ ಕರ್ತವ್ಯ ನಿರ್ಲಕ್ಷ್ಯದ ಬಗ್ಗೆ ಇದ್ದ ಎಲ್ಲಾ ಊಹಾಪೋಹಗಳಿಗೆ ಸಚಿವರು ತೆರೆ ಎಳೆದಿದ್ದಾರೆ. ಹೆಮರಾಜಿಕ್ ಸೆಪ್ಟಿಸೆಮಿಯಾ ಎಂಬುದು ಒಂದು ಮಾರಕ ಸಾಂಕ್ರಾಮಿಕ ರೋಗವಾಗಿರುವುದರಿಂದ, ಈ ಸಾವಿನ ಘಟನೆಯಲ್ಲಿ ಮೇಲ್ನೋಟಕ್ಕೆ ಅಧಿಕಾರಿಗಳ ಕರ್ತವ್ಯ ನಿರ್ಲಕ್ಷ್ಯ ಕಂಡುಬಂದಿರುವುದಿಲ್ಲ ಎಂದು ಸಚಿವ ಖಂಡ್ರೆ ಸ್ಪಷ್ಟಪಡಿಸಿದರು.

ಈ ಪ್ರಕರಣದ ತನಿಖೆಗಾಗಿ ಕೈಗೊಂಡ ಕ್ರಮಗಳನ್ನು ವಿವರಿಸಿದ ಅವರು, ಪ್ರಾಣಿ ಆರೋಗ್ಯ ಮತ್ತು ಪಶುವೈದ್ಯ ಜೈವಿಕ ಸಂಸ್ಥೆ ತಂಡವು ಕೂಡಲೇ ಕಾರ್ಯಾಚರಣೆಗೆ ಇಳಿದಿತ್ತು. ಬೆಂಗಳೂರಿನ ಹೆಬ್ಬಾಳದಿಂದ ನುರಿತ ಪಶುವೈದ್ಯಾಧಿಕಾರಿಗಳು ಮತ್ತು ತಜ್ಞರ ತಂಡವನ್ನು ಭೂತರಾಮನಹಟ್ಟಿಯಲ್ಲಿರುವ ಮೃಗಾಲಯಕ್ಕೆ ಕಳುಹಿಸಲಾಗಿತ್ತು.

ತಜ್ಞರ ತಂಡವು ಮೃತ ಪ್ರಾಣಿಗಳನ್ನು ಸೂಕ್ಷ್ಮವಾಗಿ ಪರಿಶೀಲಿಸಿತು. ಸಾವಿಗೆ ನಿಖರವಾದ ಕಾರಣವನ್ನು ಪತ್ತೆ ಹಚ್ಚುವ ಸಲುವಾಗಿ, ಮೃತಪಟ್ಟ ಕೃಷ್ಣಮೃಗಗಳ ರಕ್ತದ ಮಾದರಿಗಳನ್ನು (Blood Samples) ಮತ್ತು ಆಂತರಿಕ ಅಂಗಗಳ (Organs) ಮಾದರಿಗಳನ್ನು ಹೆಚ್ಚಿನ ಪ್ರಯೋಗ ಮತ್ತು ದೃಢೀಕರಣಕ್ಕಾಗಿ ಪ್ರಯೋಗಾಲಯಕ್ಕೆ ಕಳುಹಿಸಲಾಗಿತ್ತು. ಈ ವರದಿಗಳಲ್ಲಿಯೇ 'ಹೆಮರಾಜಿಕ್ ಸೆಪ್ಟಿಸೆಮಿಯಾ' ಎಂಬ ರೋಗದ ಅಂಶಗಳು ದೃಢಪಟ್ಟಿವೆ.

ಕಿತ್ತೂರು ರಾಣಿ ಚನ್ನಮ್ಮ ಕಿರು ಮೃಗಾಲಯದಲ್ಲಿ ಒಟ್ಟು 38 ಕೃಷ್ಣಮೃಗಗಳು ಇದ್ದವು. ಅವುಗಳಲ್ಲಿ ದುರದೃಷ್ಟವಶಾತ್ 31 ಪ್ರಾಣಿಗಳು ಮೃತಪಟ್ಟಿದ್ದವು. ಉಳಿದ 7 ಕೃಷ್ಣಮೃಗಗಳನ್ನು ರಕ್ಷಿಸಲಾಗಿದ್ದು, ಅವುಗಳಿಗೆ ತೀವ್ರ ನಿಗಾ ವಹಿಸಿ, ರೋಗದಿಂದ ಪಾರು ಮಾಡಲು ಎಲ್ಲಾ ಅಗತ್ಯ ಮುನ್ನೆಚ್ಚರಿಕೆ ಕ್ರಮಗಳು ಮತ್ತು ವೈದ್ಯಕೀಯ ಚಿಕಿತ್ಸೆಯನ್ನು ನೀಡಲಾಗುತ್ತಿದೆ ಎಂದು ಸಚಿವರು ಮಾಹಿತಿ ನೀಡಿದರು.

ಸಾಂಕ್ರಾಮಿಕ ರೋಗವು ಮೃಗಾಲಯದಲ್ಲಿರುವ ಕೇವಲ ಕೃಷ್ಣಮೃಗಗಳಿಗೆ ಸೀಮಿತವಾಗಿದೆಯೇ ಅಥವಾ ಇತರ ಪ್ರಾಣಿಗಳಿಗೆ ಹರಡುವ ಸಾಧ್ಯತೆ ಇದೆಯೇ ಎಂಬುದರ ಬಗ್ಗೆಯೂ ಆತಂಕ ವ್ಯಕ್ತವಾಗಿದೆ. ಈ ಹಿನ್ನೆಲೆಯಲ್ಲಿ, ರೋಗವು ಬೇರೆ ಪ್ರಾಣಿಗಳಿಗೆ ಹರಡದಂತೆ ತಡೆಯಲು ಜೈವಿಕ ಸುರಕ್ಷತಾ ಕ್ರಮಗಳನ್ನು ಬಿಗಿಗೊಳಿಸಲಾಗಿದೆ. ಮೃಗಾಲಯದ ಆವರಣದಲ್ಲಿ ಸಂಪೂರ್ಣ ಶುದ್ಧೀಕರಣ ಮತ್ತು ಸೋಂಕು ನಿವಾರಣಾ ಕಾರ್ಯಗಳನ್ನು ಕೈಗೊಳ್ಳಲಾಗಿದೆ.

ಇದರ ಜೊತೆಗೆ, ಅರಣ್ಯ ಸಚಿವರು ಒಂದು ಪ್ರಮುಖ ನಿರ್ಧಾರವನ್ನು ಪ್ರಕಟಿಸಿದರು. "ಹೆಮರಾಜಿಕ್ ಸೆಪ್ಟಿಸೆಮಿಯಾ" ಸಾಂಕ್ರಾಮಿಕ ರೋಗವು ರಾಜ್ಯದ ಮೃಗಾಲಯಗಳಿಗೆ ಗಂಭೀರ ಅಪಾಯ ತಂದೊಡ್ಡುವ ಸಾಧ್ಯತೆ ಇರುವುದರಿಂದ, ತಕ್ಷಣದ ಮುನ್ನೆಚ್ಚರಿಕೆಗಾಗಿ ಕ್ರಮ ತೆಗೆದುಕೊಳ್ಳಲಾಗಿದೆ. ಕರ್ನಾಟಕ ಮೃಗಾಲಯ ಪ್ರಾಧಿಕಾರದ ಅಧೀನದಲ್ಲಿರುವ ರಾಜ್ಯದ ಎಲ್ಲಾ ಮೃಗಾಲಯಗಳ ಕಾರ್ಯನಿರ್ವಾಹಕ ನಿರ್ದೇಶಕರಿಗೆ ಈ ರೋಗದ ಬಗ್ಗೆ ಜಾಗರೂಕರಾಗಿರುವಂತೆ ಮತ್ತು ಎಲ್ಲಾ ಸುರಕ್ಷತಾ ಹಾಗೂ ಮುನ್ನೆಚ್ಚರಿಕೆ ಕ್ರಮಗಳನ್ನು ಕಟ್ಟುನಿಟ್ಟಾಗಿ ಅನುಸರಿಸುವಂತೆ ನಿರ್ದೇಶನಗಳನ್ನು ನೀಡಲಾಗಿದೆ ಎಂದು ಸಚಿವರು ಸ್ಪಷ್ಟಪಡಿಸಿದರು.



ಸಾಂಧರ್ಬಿಕ ಚಿತ್ರ

# ಗ್ಯಾಸ್ ಗೀಸರ್ ಸೋರಿಕೆ ತಾಯಿ ಮಗು ದುರ್ಮರಣ



**ಬೆಂಗಳೂರು:** ಗ್ಯಾಸ್ ಗೀಸರ್ ಸೋರಿಕೆಯಿಂದ ತಾಯಿ – ಮಗು ಸಾವ ನ್ನಪ್ಪಿದ ಘಟನೆ ಗೋವಿಂದರಾಜ ನಗರದಲ್ಲಿ ನಡೆದಿದೆ. ಮೃತರನ್ನು ಚಾಂದಿನಿ (26), ಯುವಿ (4) ಎಂದು ಗುರುತಿಸಲಾಗಿದೆ. ಮಧ್ಯಾಹ್ನ ಸ್ನಾನಕ್ಕೆಂದು ತೆರಳಿದ್ದಾಗ ಗ್ಯಾಸ್ ಸೋರಿಕೆಯಾಗಿ ಅಸ್ವಸ್ಥರಾಗಿದ್ದರು. ಅವರನ್ನು ವಿಕ್ಟೋರಿಯಾ ಆಸ್ಪತ್ರೆಗೆ ದಾಖಲಿಸಲಾಗಿತ್ತು.

ಆದರೆ ಚಿಕಿತ್ಸೆ ಫಲಕಾರಿಯಾಗದೇ ಇಬ್ಬರು ಆಸ್ಪತ್ರೆಯಲ್ಲಿ ಸಾವನ್ನಪ್ಪಿದ್ದಾರೆ. ಪ್ರತಿದಿನ ದೊಡ್ಡ ಮಗಳನ್ನ ಶಾಲೆಯಿಂದ 4 ಗಂಟೆಗೆ ಕರೆದುಕೊಂಡು ಬರಲು ಚಾಂದಿನಿ ಹೋಗುತ್ತಿದ್ದರು.

ಆದರೆ ಮಗಳನ್ನ ಕರೆದುಕೊಂಡು ಬರಲು ಶಾಲೆಗೆ ಹೋಗದ ಕಾರಣ ಶಾಲೆಯಿಂದ ಚಾಂದಿನಿ ಪತಿ ಕಿರಣ್‌ಗೆ ಫೋನ್ ಮಾಡಿದ್ದರು. ಬಳಿಕ ಚಾಂದಿನಿಗೆ ಕರೆ ಮಾಡಿದರೆ ರಿಸೀವ್ ಮಾಡಿರಲಿಲ್ಲ. ಇದರಿಂದ ಕಿರಣ್ ತಮ್ಮನಿಗೆ ಕರೆ ಮಾಡಿ ನೋಡುವಂತೆ ತಿಳಿಸಿದ್ದರು. ಕಿರಣ್ ತಮ್ಮ ಪ್ರವೀಣ್ ಮನೆಗೆ ಬಂದು ನೋಡಿದಾಗ ಬಾತ್ ರೂಮ್‌ನಲ್ಲಿ ತಾಯಿ ಮಗು ಪ್ರಜ್ಞಾಹೀನ ಸ್ಥಿತಿಯಲ್ಲಿ ಬಿದ್ದಿರುವುದು ಗೊತ್ತಾಗಿದೆ.

ಗ್ಯಾಸ್ ಗೀಸರ್ ಸೋರಿಕೆಯಿಂದ ದುರ್ಘಟನೆ ಸಂಭವಿಸಿರುವ ಶಂಕೆ ವ್ಯಕ್ತವಾಗಿದೆ. ಘಟನೆ ಸಂಬಂಧ ಗೋವಿಂದ ರಾಜ ನಗರ ಪೊಲೀಸ್ ಠಾಣೆಯಲ್ಲಿ ಅಸಹಜ ಸಾವು ಪ್ರಕರಣ ದಾಖಲಾಗಿದೆ

Printed by: R Ramesh, Published by Abhishek D R On Behalf of Abhishek D R, Printed at Maruthi Enterprises. No.1159, Near Floor Mill, D Cross, Doddaballapura Town, Bengaluru rural, Karnataka - 561203, Published at No. 3769/1, Rajarathna Nivasa, KSRTC Layout, Near Ambedkar Stadium, Rayan Nagara, Nelamangala. Editor Abhishek D R.